# Akashvani : Bangalore
# Regional Bulletin In Kannada
# 03.10.2025 : 14.30hrs

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

*********

**ಮುಖ್ಯಾಂಶಗಳು :**

೧. ಮಲೆ ಮಹದೇಶ್ವರ ವನ್ಯಧಾಮದಲ್ಲಿ ಹುಲಿ ಕಳೇಬರ ಪತ್ತೆ; ತನಿಖೆಗೆ ಸಚಿವ ಈಶ್ವರ ಖಂಡ್ರೆ ಆದೇಶ

೨. ತೆರಿಗೆ ಹಣ ನೀಡುವಲ್ಲಿ ಕೇಂದ್ರ ಸರ್ಕಾರ ತಾರತಮ್ಯ; ಮುಖ್ಯಮಂತ್ರಿ ಸಿದ್ದರಾಮಯ್ಯ ಅಸಮಾಧಾನ

೩. ಬೆಳಗಾವಿಯಲ್ಲಿ ಪ್ರವಾಹ ಪರಿಸ್ಥಿತಿ ಅವಲೋಕಿಸಿದ ಪ್ರತಿ ಪಕ್ಷ ನಾಯಕ ಆರ್. ಅಶೋಕ

೪. ಆಸ್ಪತ್ರೆಯಿಂದ ಬಿಡುಗಡೆಯಾದ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ; ಕಾಂಗ್ರೆಸ್ ಮುಖಂಡರಿಂದ ಆರೋಗ್ಯ ವಿಚಾರಣೆ

೫. ಮಡಿಕೇರಿಯಲ್ಲಿ ದಶಮಂಟಪಗಳ ಶೋಭಾಯಾತ್ರೆ ಇಂದು ಮುಂಜಾನೆ ಸಂಪನ್ನ; ಮಂಗಳೂರಿನ ಕುದ್ರೋಳಿ ನವರಾತ್ರಿ ಉತ್ಸವಕ್ಕೂ ತೆರೆ

************

ವನ್ಯಜೀವಿ ಸಪ್ತಾಹದ ಆರಂಭದ ದಿನವೇ ಮಲೆ ಮಹದೇಶ್ವರ ಬೆಟ್ಟ ಹನೂರು ವಲಯದಲ್ಲಿ ಹುಲಿಯ ಅರ್ಧ ಕಳೆಬರ ಪತ್ತೆಯಾಗಿದೆ. ಈ ಕುರಿತಂತೆ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಈಶ್ವರ ಬಿ. ಖಂಡ್ರೆ ಪಿಸಿಸಿಎಫ್ ನೇತೃತ್ವದ ತಂಡದಿಂದ ತನಿಖೆಗೆ ಆದೇಶ ನೀಡಿದ್ದಾರೆ. ಈ ಸಂಬಂಧ ಅಪರ ಮುಖ್ಯ ಕಾರ್ಯದರ್ಶಿಯವರಿಗೆ ಲಿಖಿತ ಆದೇಶ ನೀಡಿರುವ ಅರಣ್ಯ ಸಚಿವರು, ಪಿಸಿಸಿಎಫ್ ಸ್ಮಿತಾ ಬಿಜ್ಜೂರು ಅವರ ನೇತೃತ್ವದಲ್ಲಿ ತಂಡವೊಂದನ್ನು ರಚಿಸಿ ಸ್ಥಳಕ್ಕೆ ಖುದ್ದು ಭೇಟಿ ನೀಡಿ ಪರಿಶೀಲಿಸಲು ಆದೇಶಿಸುವಂತೆ ಸೂಚಿಸಿದ್ದಾರೆ. ಕಳೆದ ೩ ವರ್ಷಗಳಲ್ಲಿ ದಾಖಲಾಗಿರುವ ಕಳ್ಳಬೇಟೆ ಪ್ರಕರಣಗಳ ಬಗ್ಗೆಯೂ ಗಮನ ಹರಿಸಿ, ಹಿಂದಿನ ತನಿಖಾ ವರದಿಗಳನ್ನೂ ಪರಾಮರ್ಶಿಸಿ ಮುಂದೆ ಈ ಭಾಗದಲ್ಲಿ ಇಂತಹ ಘಟನೆ ಮರುಕಳಿಸದಂತೆ ಕ್ರಮವಹಿಸುವಂತೆ ನಿರ್ದೇಶ ನೀಡಿದ್ದಾರೆ. ಕರ್ತವ್ಯದಲ್ಲಿ ನಿರ್ಲಕ್ಷ್ಯ ತೋರಿದ ಅಧಿಕಾರಿಗಳ ವಿರುದ್ಧ ಹಾಗೂ ಕಳ್ಳಬೇಟೆಗಾರರ ವಿರುದ್ಧ ಸೂಕ್ತ ಕ್ರಮದ ಶಿಫಾರಸಿನೊಂದಿಗೆ ೮ ದಿನಗಳಲ್ಲಿ ವರದಿ ಸಲ್ಲಿಸಲು ಸೂಚಿಸಿದ್ದಾರೆ. ಹುಲಿ ಹಂತಕರನ್ನು ಪತ್ತೆಮಾಡಿ ಅವರಿಗೆ ಕಾನೂನು ರೀತಿ ದಂಡನೆ ಕೊಡಿಸಲು ತುರ್ತು ಕ್ರಮ ವಹಿಸಲು ಆದೇಶ ಹೊರಡಿಸುವಂತೆ ನಿರ್ದೇಶನ ನೀಡಿದ್ದಾರೆ.

************

ಕೇಂದ್ರ ಸರ್ಕಾರ ತೆರಿಗೆ ಹಣ ನೀಡುವಲ್ಲಿ ತಾರತಮ್ಯವೆಸಗುತ್ತಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಆರೋಪಿಸಿದ್ದಾರೆ. ಮೈಸೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಕೇಂದ್ರ ಸರ್ಕಾರ ಉತ್ತರ ಪ್ರದೇಶಕ್ಕೆ ಶೇಕಡ ೧೭ರಷ್ಟು ತೆರಿಗೆ ಪಾಲು ನೀಡಿದ್ದು ರಾಜ್ಯಕ್ಕೆ ಕೇವಲ ಶೇಕಡ ೩.೫ರಷ್ಟು ನೀಡಲಾಗಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕೇಂದ್ರಕ್ಕೆ ನಾಲ್ಕೂವರೆ ಲಕ್ಷ ಕೋಟಿ ತೆರಿಗೆ ನೀಡುತ್ತಿರುವ ರಾಜ್ಯಕ್ಕೆ ಕೇವಲ ಶೇಕಡ ೧೪ರಷ್ಟು ತೆರಿಗೆ ಹಣ ನೀಡಲಾಗುತ್ತಿದೆ ಎಂದು ತಿಳಿಸಿದ್ದಾರೆ.

************

ಪ್ರವಾಹದಿಂದ ಜನರು ತೀವ್ರ ಸಂಕಷ್ಟ ಎದುರಿಸುತ್ತಿದ್ದರೂ ಸ್ಪಂದಿಸದ ರಾಜ್ಯ ಸರ್ಕಾರ ಗಾಢ ನಿದ್ರೆಯಲ್ಲಿದೆ ಎಂದು ಪ್ರತಿಪಕ್ಷ ನಾಯಕ ಆರ್. ಅಶೋಕ ಆರೋಪಿಸಿದ್ದಾರೆ. ಬೆಳೆ ಹಾನಿ, ಪ್ರವಾಹ ಪರಿಸ್ಥಿತಿಯ ಬಗ್ಗೆ ಇಂದು ಬಿಜೆಪಿ ತಂಡ ಬೆಳಗಾವಿ ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರವಾಹದ ಸಂಕಷ್ಟದಿಂದ ಸಂತ್ರಸ್ತರು ದಸರಾ ಹಬ್ಬ ಆಚರಿಸಲು ಸಾಧ್ಯವಾಗಲಿಲ್ಲ. ಜಾತಿ ಸಮೀಕ್ಷೆಯಲ್ಲಿ ಸರ್ಕಾರ ಸಂತ್ರಸ್ತರನ್ನು ಮರೆತಿದೆ ಎಂದು ದೂರಿದ್ದಾರೆ. ಕಾಂಗ್ರೆಸ್‌ನ ಒಳಜಗಳ ಹಾಗೂ ಒಳ ಒಪ್ಪಂದದ ಪರಿಣಾಮ ಡಿಸೆಂಬರ್ ತಿಂಗಳಿನಲ್ಲಿ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಸ್ಥಾನದಿಂದ ನಿರ್ಗಮಿಸಲಿದ್ದಾರೆ ಎಂದು ತಿಳಿಸಿದ್ದಾರೆ. ವಿಧಾನಪರಿಷತ್ ಸದಸ್ಯ ಸಿ.ಟಿ. ರವಿ ಮಾತನಾಡಿ, ಬೆಳಗಾವಿ, ವಿಜಯಪುರ, ರಾಯಚೂರು, ಬೀದರ್, ಕಲಬುರಗಿ ಜಿಲ್ಲೆಗಳಲ್ಲಿ ಪ್ರವಾಹದಿಂದ ಹಾನಿಯುಂಟಾಗಿದೆ. ಸಂಕಷ್ಟಕ್ಕೆ ಸಿಲುಕಿದ ರೈತರ ಲಕ್ಷಾಂತರ ಬೆಳೆಹಾನಿಯಾಗಿದೆ. ಸರ್ಕಾರ ಹಾಗೂ ಮುಖ್ಯಮಂತ್ರಿ ಸ್ಪಂದಿಸುತ್ತಿಲ್ಲ ಎಂದು ಆರೋಪಿಸಿದ್ದಾರೆ. ಬಿಜೆಪಿ ನಾಯಕರು ಬೆಳಗಾವಿ ಜಿಲ್ಲೆಯ ಬೈಲಹೊಂಗಲ, ಹಿರೇಬಾಗೇವಾಡಿ, ಚಿಕ್ಕೋಡಿಯ ಕೆಲವು ಗ್ರಾಮಗಳಲ್ಲಿ ಅವಲೋಕನ ನಡೆಸಿ, ಬಳಿಕ ವಿಜಯಪುರದಲ್ಲಿ ಬೆಳೆಹಾನಿ ಪರಿಶೀಲನೆ ನಡೆಸಲಿದ್ದಾರೆ.

************

ಬೆಂಗಳೂರಿನ ಖಾಸಗಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಪ್ರತಿಪಕ್ಷ ನಾಯಕ ಮಲ್ಲಿಕಾರ್ಜುನ ಖರ್ಗೆ ಫೇಸ್ ಮೇಕರ್ ಅಳವಡಿಕೆ ಬಳಿಕ ಇಂದು ಬಿಡುಗಡೆಯಾಗಿದ್ದಾರೆ. ಈ ಕುರಿತಂತೆ ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ಸಾಮಾಜಿಕ ಮಾಧ್ಯಮದಲ್ಲಿ ಸ್ಪಷ್ಟಪಡಿಸಿದೆ. ಖರ್ಗೆ ಬಿಹಾರ ಚುನಾವಣಾ ಪ್ರಚಾರದಲ್ಲಿ ಸಕ್ರಿಯವಾಗಿ ಭಾಗವಹಿಸಲು ನಿರ್ಧರಿಸಿದ್ದಾರೆ. ಈ ನಡುವೆ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಖರ್ಗೆ ಅವರ ಆರೋಗ್ಯ ವಿಚಾರಿಸಿದ್ದಾರೆ.

************

ಬೆಂಗಳೂರು ಉತ್ತರ ನಗರ ಪಾಲಿಕೆ ವ್ಯಾಪ್ತಿಯಲ್ಲಿ ಆಯುಕ್ತ ಪೊಮ್ಮಲ ಸುನೀಲ್ ಕುಮಾರ್ ಇಂದು ನಾಗರಿಕರೊಂದಿಗೆ ಫೋನ್ ಇನ್ ಕಾರ್ಯಕ್ರಮ ನಡೆಸಿದರು. ಈ ವೇಳೆ, ಬೀದಿ ನಾಯಿಗಳ ಆಕ್ರಮಣಕಾರಿ ನಡವಳಿಕೆಯ ಬಗ್ಗೆ ದೂರು ಕೇಳಿಬಂದಿದೆ. ಬಹುಪಾಲು ದೂರುಗಳು ರಸ್ತೆ ಗುಂಡಿಗಳಿಗೆ ಸಂಬಂಧಿಸಿದ್ದಾಗಿದ್ದು, ಬೆಂಗಳೂರು ಉತ್ತರ ನಗರ ಪಾಲಿಕೆಯ ವ್ಯಾಪ್ತಿಯ ರಸ್ತೆ ಗುಂಡಿಗಳನ್ನು ತ್ವರಿತವಾಗಿ ಮುಚ್ಚಲು ಸೂಚನೆ ನೀಡಿದ್ದಾರೆ. ತ್ವರಿತವಾಗಿ ಕಸದ ಸಮಸ್ಯೆಗಳನ್ನು ಬಗೆಹರಿಸಿ, ನಗರ ಪಾಲಿಕೆಯ ವ್ಯಾಪ್ತಿಯಲ್ಲಿ ಸಮರ್ಪಕ ತ್ಯಾಜ್ಯ ನಿರ್ವಹಣೆ ಕಾರ್ಯವನ್ನು ನಡೆಸುವಂತೆ ನಿರ್ದೇಶನ ನೀಡಿದ್ದಾರೆ.

************

ಮಂಜಿನ ನಗರಿ ಮಡಿಕೇರಿಯಲ್ಲಿ ದಸರಾ ಅಂಗವಾಗಿ ನಡೆದ ದಶಮಂಟಪಗಳ ಶೋಭಾಯಾತ್ರೆ ಇಂದು ಮುಂಜಾನೆ ಕೊನೆಗೊಂಡಿದೆ. ಬನ್ನಿಮಂಟಪದಲ್ಲಿ ಬನ್ನಿ ಕಡಿಯುವ ಮೂಲಕ ದಸರಾ ಹಬ್ಬ ಸಮಾಪನಗೊಂಡಿತು. ದಶಮಂಟಪಗಳ ನಡುವಿನ ಪೈಪೋಟಿಯಲ್ಲಿ ಕೋಟೆ ಮಹಾಗಣಪತಿ ದೇವಾಲಯದ ಮಂಟಪ ಮತ್ತು ಕೋಟೆ ಮಾರಿಯಮ್ಮ ದೇವಾಲಯದ ಮಂಟಪ ಜಂಟಿಯಾಗಿ ಪ್ರಥಮ ಬಹುಮಾನ ಪಡೆಯಿತು. ದಶಮಂಟಪಗಳ ಶೋಭಾಯಾತ್ರೆ ವೀಕ್ಷಿಸಲು ರಾಜ್ಯದ ಹಲವೆಡೆಗಳಿಂದ ಜನರು ಮಡಿಕೇರಿಗೆ ಆಗಮಿಸಿದ್ದರು. ಮಂಗಳೂರು ದಸರಾ ಎಂದೇ ಖ್ಯಾತಿ ಪಡೆದ ಕುದ್ರೋಳಿ ಗೋಕರ್ಣನಾಥ ಕ್ಷೇತ್ರದ ನವರಾತ್ರಿ ಉತ್ಸವ ಸಂಪನ್ನಗೊಂಡಿದೆ. ನಿನ್ನೆ ಸಂಜೆ ೬ ಗಂಟೆಯ ಸುಮಾರಿಗೆ ಆರಂಭಗೊಂಡ ಶೋಭಾಯಾತ್ರೆ ಮಂಗಳೂರು ನಗರದ ಬೀದಿ ಬೀದಿಗಳಲ್ಲಿ ಸಾಗಿ, ಇಂದು ಬೆಳಗ್ಗೆ ೮ ಗಂಟೆಯ ಸುಮಾರಿಗೆ ಮರಳಿ ಕುದ್ರೋಳಿ ಕ್ಷೇತ್ರಕ್ಕೆ ಆಗಮಿಸಿದ ಶಾರದೆ ಸೇರಿದಂತೆ ನವದುರ್ಗೆಯರನ್ನು ಕ್ಷೇತ್ರದ ಪುಷ್ಕರಣಿಯಲ್ಲಿ ಜಲಸ್ತಂಭನಗೊಳಿಸಲಾಯಿತು. ರಾಜ್ಯದ ವಿವಿಧ ಜಿಲ್ಲೆಗಳ ಕಲಾ ತಂಡಗಳು, ಜಾಗೃತಿ ಮೂಡಿಸುವ ಕಲಾ ತಂಡಗಳು ಗಮನಸೆಳೆದವು.

************

ನ್ಯಾನೊ ಯೂರಿಯಾ ಮತ್ತು ನ್ಯಾನೊ ಡಿಎಪಿ ಭಾರತದ ಕೃಷಿ ಕ್ಷೇತ್ರದಲ್ಲಿ ಕ್ರಾಂತಿಕಾರಕ ಬದಲಾವಣೆಗೆ ಕಾರಣವಾಗಲಿದೆ ಎಂದು ದಾವಣಗೆರೆ ತಾಲೂಕು ಸಹಾಯಕ ಕೃಷಿ ನಿರ್ದೇಶಕ ಡಿ.ಎಂ. ಶ್ರೀಧರ ಮೂರ್ತಿ ತಿಳಿಸಿದ್ದಾರೆ. ನಾಗನೂರು ಗ್ರಾಮದಲ್ಲಿ ಭೂ ಮಾತಾ ರೈತ ಉತ್ಪಾದಕರ ಕಂಪನಿ ಆಯೋಜಿಸಿದ್ದ ಕೃಷಿ ಪರಿಕರಗಳ ಪ್ರದರ್ಶನ ಮತ್ತು ಮಾರಾಟ ಮೇಳಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಹರಳು ರೂಪದ ಯೂರಿಯಾ ಹಾಕುವುದರಿಂದ ಶೇಕಡ ೪೦ರಷ್ಟು ಯೂರಿಯಾ ಮಾತ್ರ ಬೆಳೆಗಳಿಗೆ ತಲುಪಲಿದೆ. ಭವಿಷ್ಯದಲ್ಲಿ ಹರಳು ರೂಪದ ಯೂರಿಯಾ ಮತ್ತು ಡಿಎಪಿ ಉತ್ಪಾದನೆ ಸ್ಥಗಿತಗೊಂಡರೂ ಅಚ್ಚರಿ ಇಲ್ಲ ಎಂದು ತಿಳಿಸಿದ್ದಾರೆ. ಇದರ ಬದಲಾಗಿ ನ್ಯಾನೊ ಯೂರಿಯಾ ಪ್ರಚಲಿತಗೊಳಿಸಲು ಎಲ್ಲ ಸಿದ್ಧತೆಗಳನ್ನು ಮಾಡಿ ಕೊಳ್ಳಲಾಗಿದೆ ಎಂದು ಹೇಳಿದ್ದಾರೆ.

****ಧ್ವನಿ*** ಡಿ.ಎಂ. ಶ್ರೀಧರ ಮೂರ್ತಿ

************

ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ ರಾಜ್ಯದ ಜನರ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಮಾಹಿತಿ ಸಂಗ್ರಹಿಸಲು ನಡೆಸಲಾಗುತ್ತಿರುವ ಸಮೀಕ್ಷೆ ಕಾರ್ಯದಲ್ಲಿ, ಉತ್ತರ ಕನ್ನಡ ಜಿಲ್ಲೆಯಲ್ಲಿ ಈವರೆಗೆ ಒಂದು ಲಕ್ಷ ೯೨ ಸಾವಿರದ ೬೨೨ ಮನೆಗಳ ಸಮೀಕ್ಷೆಯನ್ನು ಪೂರ್ಣಗೊಳಿಸಲಾಗಿದೆ. ಸಮೀಕ್ಷೆ ಕಾರ್ಯದಲ್ಲಿ ಜಿಲ್ಲೆಯಲ್ಲಿ ಇದುವರೆಗೂ ಶೇಕಡ ೫೮.೯೩ರಷ್ಟು ಸಾಧನೆ ಮಾಡಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ. ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸಮೀಕ್ಷೆಗೆ ಗೊತ್ತುಪಡಿಸಿದ ಗಣತಿದಾರರ ಪೈಕಿ ೪೨೫ ಮಂದಿ ಕಾರ್ಯಕ್ಕೆ ಹಾಜರಾಗದೆ ನಿರ್ಲಕ್ಷ್ಯ ತೋರಿದ್ದಾರೆ. ಅಂತವರ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು ಎಂದು ದಕ್ಷಿಣ ಕನ್ನಡ ಜಿಲ್ಲಾಧಿಕಾರಿ ದರ್ಶನ್ ಎಚ್.ವಿ ಎಚ್ಚರಿಸಿದ್ದಾರೆ. ಮಂಗಳೂರು ತಾಲೂಕಿನಲ್ಲಿ ೧ ಸಾವಿರದ ೭೧೪ ಗಣತಿದಾರರನ್ನು ನೇಮಕ ಮಾಡಲಾಗಿದೆ. ಈ ಪೈಕಿ ಇದುವರೆಗೆ ೪೨೫ ಗಣತಿದಾರರು ಸಮೀಕ್ಷೆ ಕಾರ್ಯಕ್ಕೆ ಹಾಜರಾಗದೆ ಕರ್ತವ್ಯಲೋಪ ತೋರಿರುವುದನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿದೆ. ಅವರು ಶೀಘ್ರವೇ ಕರ್ತವ್ಯಕ್ಕೆ ಹಾಜರಾಗದಿದ್ದಲ್ಲಿ ಸೂಕ್ತ ಕ್ರಮ ಜರುಗಿಸಲಾಗುವುದು ಎಂದು ತಿಳಿಸಿದ್ದಾರೆ.

************